# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 907 |
| ಸದಸ್ಯರ ಹೆಸರು | : | ಶ್ರೀ ಸಿ.ಟಿ ರವಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 17.12.2024 |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಎಲೆ ಚುಕ್ಕೆ ಮತ್ತು ಕೊಳೆ ರೋಗದಿಂದ ಅಡಿಕೆ ಫಸಲು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದರೆ, ಎಷ್ಟು ಎಕರೆ ಅಡಿಕೆ ಬೆಳೆ ರೋಗಕ್ಕೆ ತುತ್ತಾಗಿದೆ; (ಜಿಲ್ಲಾವಾರು ವಿವರ ನೀಡುವುದು)</td><td>ಬಂದಿದೆ.<br><br>ಅಡಿಕೆ ಬೆಳೆಯ ಎಲೆಚುಕ್ಕೆ ರೋಗಕ್ಕೆ 1,34,192 ಎಕರೆ ಹಾಗೂ ಕೊಳೆ ರೋಗಕ್ಕೆ 1,88,107 ಎಕರೆಯಲ್ಲಿ ತುತ್ತಾಗಿರುವುದಾಗಿ ಅಂದಾಜಿಸಲಾಗಿದೆ. ಜಿಲ್ಲಾವಾರು ವಿವರ ಕೆಳಕಂಡಂತಿದೆ.
<table>
<tr><th>ಜಿಲ್ಲೆ</th><th>ಎಲೆಚುಕ್ಕೆ ರೋಗಕ್ಕೆ ತುತ್ತಾದ ಪ್ರದೇಶ (ಹೆಕ್ಟೇರ್ ಗಳಲ್ಲಿ)</th><th>ಕೊಳೆ ರೋಗಕ್ಕೆ ತುತ್ತಾದ ಪ್ರದೇಶ (ಹೆಕ್ಟೇರ್ ಗಳಲ್ಲಿ)</th></tr>
<tr><td>ಚಿಕ್ಕಮಗಳೂರು</td><td>71970</td><td>62510</td></tr>
<tr><td>ಶಿವಮೊಗ್ಗ</td><td>29875</td><td>79717</td></tr>
<tr><td>ಉತ್ತರ ಕನ್ನಡ</td><td>21510</td><td>43555</td></tr>
<tr><td>ದಕ್ಷಿಣ ಕನ್ನಡ</td><td>9057</td><td>2075</td></tr>
<tr><td>ಹಾಸನ</td><td>150</td><td>250</td></tr>
<tr><td>ಉಡುಪಿ</td><td>307</td><td>0</td></tr>
<tr><td>ಕೊಡಗು</td><td>1323</td><td>0</td></tr>
<tr><td>ಒಟ್ಟು</td><td>13,4192</td><td>188107</td></tr>
</table></td></tr>
<tr><td>ಆ)</td><td>ಅಡಿಕೆ ಬೆಳೆಗೆ ರೋಗ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; ಅಡಿಕೆ ಬೆಳೆ ರೋಗದಿಂದ ನಷ್ಟಕೊಳ್ಳಗಾಗಿರುವ ರೈತರಿಗೆ ಸರ್ಕಾರ ಪರಿಹಾರ ನೀಡಿದೆಯೇ; ನೀಡಿರುವ ಪರಿಹಾರದ ಮೊತ್ತ ಎಷ್ಟು;</td><td>ಅಡಿಕೆ ಬೆಳೆಗೆ ರೋಗ ತಡೆಗಟ್ಟಲು ಕೈಗೊಂಡ ಕ್ರಮಗಳು ಕೆಳಕಂಡಂತಿವೆ.<br>1. 2023-24ನೇ ಸಾಲಿನಲ್ಲಿ ರೈತರಿಗೆ ಪ್ರತಿ ಹೆಕ್ಟೇರ್‌ಗೆ ರೂ.4000 ಗಳಂತೆ 1.5 ಹೆಕ್ಟೇರ್ ವರೆಗೆ ಪ್ರತಿ ಫಲಾನುಭವಿಗೆ ಗರಿಷ್ಠ ರೂ.6,000 ಮೊತ್ತದ ಸಸ್ಯ</td></tr>
</table>

| | | |
|---|---|---|
| ಇ) | ನೀಡದಿದ್ದಲ್ಲಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದರೇ, ಯಾವ ಕಾಲಮಿತಿಯೊಳಗೆ ಪರಿಹಾರ ನೀಡಲಾಗುವುದು? (ವಿವರ ಒದಗಿಸುವುದು) | ಸಂರಕ್ಷಣಾ ಔಷಧಿಗಳನ್ನು 6,250 ಹೆಕ್ಟೇರ್ ಪ್ರದೇಶಕ್ಕೆ ವಿತರಿಸಿ ರೂ. 250.00 ಲಕ್ಷಗಳ ಸಹಾಯಧನವನ್ನು 12,300 ಅಡಿಕೆ ಬೆಳೆಗಾರರಿಗೆ ನೀಡಲಾಗಿರುತ್ತದೆ.<br><br>2. ಬೆಳೆಯ ಕಟಾವು ಹಾಗೂ ಸಿಂಪರಣೆಗಾಗಿ ರೈತರಿಗೆ ದೋಟಿ ಖರೀದಿಸಲು ಕೃಷಿ ಯಾಂತ್ರೀಕರಣ ಯೋಜನೆಯಡಿ ಸಾಮಾನ್ಯ ವರ್ಗದವರಿಗೆ ಶೇ.40 ರಷ್ಟು ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ.50 ರಂತೆ ಸಹಾಯಧನ ನೀಡಲಾಗುತ್ತಿದೆ. 2023-24 ನೇ ಸಾಲಿನಲ್ಲಿ 1201 ಫಲಾನುಭವಿಗಳಿಗೆ ರೂ.366.68 ಲಕ್ಷಗಳ ಸಹಾಯಧನ ನೀಡಲಾಗಿದೆ.<br><br>3. ಅಡಿಕೆ ಎಲೆಚುಕ್ಕೆ ರೋಗದ ನಿಯಂತ್ರಣ ಕುರಿತು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ತಜ್ಞರ ಸಹಯೋಗದೊಂದಿಗೆ ತರಬೇತಿ, ಕಾರ್ಯಾಗಾರಗಳು ಹಾಗೂ ಪ್ರಾತ್ಯಕ್ಷತೆಗಳನ್ನು ಏರ್ಪಡಿಸುವುದರ ಮೂಲಕ ಅರಿವು ಮೂಡಿಸಲಾಗುತ್ತಿದೆ.<br><br>4. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯಡಿ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಘಟಕ ವೆಚ್ಚದ ರೂ.4000 ಗಳಲ್ಲಿ ಶೇ.30 ರಂತೆ, ಪ್ರತಿ ಹೆಕ್ಟೇರ್ ಗೆ ರೂ.1200 ರಂತೆ 4 ಹೆಕ್ಟೇರ್ ವರೆಗೆ ಗರಿಷ್ಠ ರೂ. 4800 ಗಳ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಒಟ್ಟು 402 ಲಕ್ಷಗಳ ಅನುದಾನ ಒದಗಿಸಲಾಗಿದ್ದು, ಈವರೆವಿಗೂ ರೂ.289.90 ಲಕ್ಷ ವಿನಿಯೋಗಿಸಿ 25406 ಹೆಕ್ಟೇರ್ ಪ್ರದೇಶದಲ್ಲಿ 7814 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ.<br><br>5. ರೈತರಿಗೆ ಸಸ್ಯ ಸಂರಕ್ಷಣೆ ಔಷಧಿ ಖರೀದಿಸಲು ಸಹಾಯಧನ ನೀಡಲಾಗುತ್ತಿದೆ. ಪ್ರತಿ ಹೆಕ್ಟೇರ್ ಘಟಕ ವೆಚ್ಚ ರೂ.10,000/- ದಲ್ಲಿ ಸಾಮಾನ್ಯ ವರ್ಗದವರಿಗೆ ಶೇ.75 ರಂತೆ ರೂ.7500 ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ |

| | | |
|---|---|---|
| | | ಪಂಗಡದ ರೈತರಿಗೆ ಶೇ. 90ರಷ್ಟು ರೂ. 9000/- ನೀಡಲಾಗುತ್ತಿದೆ. ಪ್ರಸಕ್ತ ಸಾಲಿಗೆ 500 ಲಕ್ಷ ನಿಗದಿಪಡಿಸಲಾಗಿದ್ದು, ಈವರೆವಿಗೂ ರೂ.376.08 ಲಕ್ಷ ವಿನಿಯೋಗಿಸಿ 4121 ಹೆಕ್ಟೇರ್ ಪ್ರದೇಶದಲ್ಲಿ 3364 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ.<br><br>6. ಜಿಲ್ಲೆ/ತಾಲ್ಲೂಕು/ಹೋಬಳಿ ಮಟ್ಟದಲ್ಲಿ ರೈತರಿಗೆ ಕ್ಷೇತ್ರೋತ್ಸವ/ ತರಬೇತಿ/ ಕಾರ್ಯಾಗಾರ/ ವಿಚಾರ ಸಂಕೀರ್ಣಗಳನ್ನು ಏರ್ಪಡಿಸುವ ಮೂಲಕ ತೋಟಗಾರಿಕೆ ಬೆಳೆಗಳ ಕುರಿತು ತಾಂತ್ರಿಕ ಮಾಹಿತಿ, ಕೀಟ ಬಾಧೆ, ರೋಗಗಳ ನಿರ್ವಹಣಾ ಕ್ರಮಗಳು ಹಾಗೂ ಮುಂಜಾಗರೂಕ ಕ್ರಮಗಳ ಕುರಿತು ಮಾಹಿತಿ ನೀಡಲಾಗುತ್ತಿದೆ. ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ತಜ್ಞರ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ.<br><br>7. ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳಲ್ಲಿನ ಸಹಾಯಕ ತೋಟಗಾರಿಕೆ ಅಧಿಕಾರಿಗಳು ಈ ಬೆಳೆ ಕುರಿತಾದ ತಾಂತ್ರಿಕ ಮಾಹಿತಿಯನ್ನು ಗ್ರಾಮ ಸಭೆಗಳ ಮೂಲಕ ಹಾಗೂ ರೈತರ ತಾಕುಗಳಿಗೆ ಭೇಟಿ ನೀಡುವ ಸಂಧರ್ಭದಲ್ಲಿ ಒದಗಿಸುತ್ತಿರುತ್ತಾರೆ.<br><br>ಅಡಿಕೆ ಬೆಳೆ ರೋಗದಿಂದ ನಷ್ಟಕ್ಕೊಳಗಾಗಿರುವ ರೈತರಿಗೆ ತೋಟಗಾರಿಕೆ ಇಲಾಖೆಯಿಂದ ಪರಿಹಾರ ನೀಡುವ ಕಾರ್ಯಕ್ರಮ ಇರುವುದಿಲ್ಲ. ಹೀಗಾಗಿ ಪರಿಹಾರ ನೀಡುವ ಪ್ರಶ್ನೆ ಹಾಗೂ ಕಾಲಮಿತಿ ಉದ್ಭವಿಸುವುದಿಲ್ಲ. |

HORTI 549 HGM 2024(E)

**(ಎಸ್. ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು**